ಇ) ಕೊಡಗು ಜಿಲ್ಲೆಯಲ್ಲಿ ಒಟ್ಟು ಎಷ್ಟು ಕಿ.ಮೀ. ರಸ್ತೆ ಕೆ.ಆರ್.ಡಿ.ಸಿ. ವ್ಯಾಪ್ತಿಯಲ್ಲಿ ಬರುತ್ತದೆ; (ತಾಲ್ಲೂಕುವಾರು ವಿವರ ನೀಡುವುದು)?

ಶ್ರೀ ಧರ್ಮಸಿಂಗ್ (ಲೋಕೋಪಯೋಗಿ ಸಚಿವರು) :

ಅ) ಕೆ.ಆರ್.ಡಿ.ಸಿ.ಎಲ್. ಮತಿಯಿಂದ ರೂ. 3.96 ಕೋಟಿ ಮೊತ್ತದಲ್ಲಿ ರಾಜ್ಯ ಹೆದ್ದಾರಿಗಳ ಮೂರು ವರ್ಷಗಳ ನಿರ್ವಹಣೆಯನ್ನು ಕೊಡಗು ಜಿಲ್ಲೆಯಲ್ಲಿ ಮಾಡಲಾಗುತ್ತಿದೆ.

ಆ) ನಿಜವಲ್ಲ.

ರಾಜ್ಯ ಹೆದ್ದಾರಿಯ ನಿರ್ವಹಣೆಯ ಮೊತ್ತವು ರೂ. 3.96 ಕೋಟಿಗಳು. ಈ ಜಿಲ್ಲೆಯ ರಾಜ್ಯ ಹೆದ್ದಾರಿಗಳ ಭೂಮಿಯ ಸಿ.ಬಿ.ಆರ್.ನ ಪ್ರಮಾಣವು ಶೇ. 6 ಕ್ಕಿಂತ ಕಡಿಮೆ ಇರುವ ಮರುಡಾಂಬರೀಕರಣವನ್ನು ತೆಗೆದುಕೊಂಡಿರುವುದಿಲ್ಲ.

ಇ) ರಾಜ್ಯ ಹೆದ್ದಾರಿಯ ಮೂರು ವರ್ಷಗಳ ನಿರ್ವಹಣೆಯ ಅಡಿಯಲ್ಲಿ ಕೊಡಗು ಜಿಲ್ಲೆಯಲ್ಲಿ ತೆಗೆದುಕೊಂಡ ರಸ್ತೆಯ ಒಟ್ಟು ಉದ್ದ 310.84 ಕಿಮೀ. ತಾಲ್ಲೂಕುವಾರು ವಿವರ ಈ ಕೆಳಗಿನಂತಿರುತ್ತದೆ.

ಸೋಮವಾರಪೇಟೆ	-	111.00 ಕಿಮೀ.
ವಿರಾಜಪೇಟೆ	-	127.24 ಕಿಮೀ.
ಮಡಿಕೇರಿ	-	72.60. ಕಿಮೀ.
ಒಟ್ಟು	-	**310.84** ಕಿಮೀ.

ಕೃಷ್ಣರಾಜಸಾಗರದ ಬೃಂದಾವನ ಉದ್ಯಾನವನದ ನವೀಕರಣ

31 (146) ಶ್ರೀ ಆತ್ಮಾನಂದ ಎಂ.ಎಸ್. (ಮಂಡ್ಯ) ಮಾನ್ಯ ಪ್ರವಾಸೋದ್ಯಮ ಮತ್ತು ಮಾಹಿತಿ ತಂತ್ರಜ್ಞಾನ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಕೃಷ್ಣರಾಜಸಾಗರದಲ್ಲಿ ಬೃಂದಾವನ ಉದ್ಯಾನವನವು, ವ್ಯವಸ್ಥಿತ ನಿರ್ವಹಣೆ ಇಲ್ಲದೇ ಸಂಬಂಧಪಟ್ಟವರ ನಿರ್ಲಕ್ಷ್ಯದಿಂದಾಗಿ ಹಿಂದಿನ ಆಕರ್ಷಣೆಯನ್ನು ಮತ್ತು ಜನಪ್ರಿಯತೆಯನ್ನು ಕಳೆದುಕೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ, ಇದರ ನವೀಕರಣಗೊಳಿಸಲು ಸರ್ಕಾರವು ಕೈಗೊಂಡಿರುವ ಕ್ರಮಗಳೇನು? (ವಿವರ ಒದಗಿಸುವುದು)

ಇ) ಈ ಯೋಜನೆಗಳು ಯಾವಾಗ ಕಾರ್ಯರೂಪಕ್ಕೆ ಬರುತ್ತದೆ?

ಶ್ರೀ ಡಿ.ಬಿ. ಇನಾಂದಾರ್ (ಪ್ರವಾಸೋದ್ಯಮ ಮತ್ತು ಮಾಹಿತಿ ತಂತ್ರಜ್ಞಾನ ರಾಜ್ಯ ಸಚಿವರು):

ಅ) ಹೌದು.

ಆ) ಬೃಂದಾವನವನ್ನು ಅಭಿವೃದ್ಧಿಪಡಿಸಲು ಬಿ.ಓ.ಟಿ. ಆಧಾರದ ಮೇಲೆ ನೀಡಲು ಖಾಸಗೀಯವರು ಟೆಂಡರ್‌ಗಳನ್ನು ಆಹ್ವಾನಿಸಿದ್ದು, ಅದನ್ನು ಪರಿಶೀಲಿಸಲಾಗುತ್ತಿದೆ.

ಇ) ಒಳ್ಳೆಯ ಬೇಡಿಕೆದಾರರನ್ನು ಆಯ್ಕೆ ಮಾಡಿದ ನಂತರ.

ತಿರುಮಲದ ಅತಿಥಿ ಗೃಹಗಳಲ್ಲಿ ಮೂಲಭೂತ ಸೌಕರ್ಯದ ಕೊರತೆ

32 (153) ಶ್ರೀ ಆತ್ಮಾನಂದ ಎಂ.ಎಸ್. (ಮಂಡ್ಯ) ಮಾನ್ಯ ಮುಜರಾಯಿ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?